# ಸ್ವಾಭಿಮಾನಿ ಸೌಹಾರ್ದ ಕ್ರೆಡಿಟ್ ಕೋ ಆಪರೇಟಿವ್ ಲಿ.,

ಕೇಂದ್ರ ಕಛೇರಿ:– ನಂ.125, ಮೊದಲನೇ ಮಹಡಿ, ಡಯಾಗನಲ್ ರಸ್ತೆ, ವಿ ವಿ ಪುರಂ, ಬೆಂಗಳೂರು – 560004

www.swabhimanisouharda.coop, Ph: 080-41314393,9483514393, Email:info@swabhimanisouharda.com


**ಸಂಖ್ಯೆ:, ಸ್ವಾ..ಸ/ಸಿ.ನೇ/1/2021–22** **ದಿನಾಂಕ: 16.10.2021**

## ಅಧಿಸೂಚನೆ

ಸ್ವಾಭಿಮಾನಿ ಸೌಹಾರ್ದ ಕ್ರೆಡಿಟ್ ಕೋ ಆಪರೇಟಿವ್ ಲಿ. ಬೆಂಗಳೂರು ಇದರಲ್ಲಿ ಖಾಲಿ ಇರುವ ಹಾಗೂ ಅಗತ್ಯವಿರುವ ವಿವಿಧ ವೃಂದಗಳಲ್ಲಿನ ಹುದ್ದೆಗಳ ನೇಮಕಾತಿಯನ್ನು ಕಾಲಕಾಲಕ್ಕೆ ತಿದ್ದುಪಡಿಯಾದ ಕರ್ನಾಟಕ ರಾಜ್ಯ ಸೌಹಾರ್ದ ಸಹಕಾರಿ ಅಧಿನಿಯಮ ಮತ್ತು ಸ್ವಾಭಿಮಾನಿ ಸೌಹಾರ್ದ ಕ್ರೆಡಿಟ್ ಕೋ ಆಪರೇಟಿವ್ ಲಿ. ಬೆಂಗಳೂರು ಇದರ ಉಪವಿಧಿ ಹಾಗೂ ಸಿಬ್ಬಂದಿ ಸೇವಾನಿಯಮಾವಳಿಯ ನೇರ ನೇಮಕಾತಿ ನಿಯಮ ಹಾಗೂ ಆಡಳಿತ ಮಂಡಳಿ ಮತ್ತು ಸಿಬ್ಬಂದಿ ನೇಮಕಾತಿ ಸಮಿತಿಯ ನಿರ್ಣಯದಂತೆ ಭರ್ತಿ ಮಾಡಲು ಅಂಚೆ/ಕೋರಿಯರ್/ಖುದ್ದಾಗಿ ಸಲ್ಲಿಸುವ ಮೂಲಕ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಿದೆ. ದಿನಾಂಕ:07.10.2021ರ ಆಡಳಿತ ಮಂಡಲಿ ಸಭೆಯು ಅನುಮೋದಿಸಿದಂತೆ ನೇರ ನೇಮಕಾತಿಗೆ ಪರಿಗಣಿಸಲಾದ ಹುದ್ದೆಗಳು: ಅಧಿಕಾರಿ ( 1), ಲೆಕ್ಕ ಸಹಾಯಕರು ( 1), ಹಿರಿಯ ಸಹಾಯಕರು(1), ಕಿರಿಯ ಸಹಾಯಕರು(1)

ವಿದ್ಯಾ**ರ್ಹತೆ:** ಅಂಗೀಕೃತ ವಿಶ್ವವಿದ್ಯಾಲಯದಿಂದ ಕಾಮರ್ಸ್, accountancy, maths, law, ವಿಷಯದಲ್ಲಿ ಪದವಿ ಅಥವಾ ಸಹಕಾರ ವಿಷಯದಲ್ಲಿ ಪದವಿ, ದಿಪ್ಲೊಮ ಅಥವಾ ಸೌಹಾರ್ದ ಸಹಕಾರಿಗಳಲ್ಲಿ ಕನಿಷ್ಠ 5 ವರ್ಷ ಅನುಭವ

## ಸಾಮಾನ್ಯ ಅರ್ಹತೆ ನಿಯಮಗಳು :

1) ಮೇಲಿನ ಎಲ್ಲಾ ಹುದ್ದೆಗಳಿಗೆ ಗಣಕಯಂತ್ರ ಪರಿಣಿತಿ ಮತ್ತು ಕನ್ನಡ ಮತ್ತು ಇಂಗ್ಲೀಷ್ ಓದುವ, ಬರೆಯುವ ಮತ್ತು ಮಾತನಾಡುವ ಪರಿಣಿತಿ ಕಡ್ಡಾಯ.
2) ಸಹಕಾರಿಯಲ್ಲಿ ಖಾಲಿ ಇರುವ ಈ ಮೇಲಿನ ಹುದ್ದೆಗಳಿಗೆ ಅರ್ಜಿ ಸಲ್ಲಿಸುವ ಸಂಬಂಧ ನೇಮಕಾತಿ ಪ್ರಕ್ರಿಯೆಯ ಪೂರ್ಣ ವಿವರ ಹಾಗೂ ನಿಗದಿತ ಅರ್ಜಿಗಳನ್ನು ಸಹಕಾರಿಯ ಜಾಲ ತಾಣ website: www.swabhimanisouharda.com ರಲ್ಲಿ ನೀಡಿದ್ದು, ಅಂಚೆ/ಕೋರಿಯರ್/ಖುದ್ದಾಗಿ ಸಲ್ಲಿಸುವ ಮೂಲಕ ಅರ್ಜಿ ಸಲ್ಲಿಸತಕ್ಕದ್ದು.
3) ಸಹಕಾರಿಯಲ್ಲಿ ಗುತ್ತಿಗೆ ಅಥವಾ ತಾತ್ಕಾಲಿಕ ಸಿಬ್ಬಂದಿಯಾಗಿ ಕಾರ್ಯನಿರ್ವಹಿಸುತ್ತಿರುವ ನೌಕರರಿಗೆ ನೇಮಕಾತಿ ಪ್ರಕ್ರಿಯೆಯಲ್ಲಿ ಶೇ.90 ರಷ್ಟು ಮತ್ತು ಇಪ್ಪತ್ತು ಕೋಟಿಗಿಂತ ಹೆಚ್ಚಿನ ದುಡಿಯುವ ಬಂಡವಾಳ ಹೊಂದಿರುವ ಸೌಹಾರ್ದ ಸಹಕಾರಿಗಳಲ್ಲಿ ವ್ಯವಸ್ಥಾಪಕ/ಅಧಿಕಾರಿ ಹಾಗೂ ಮೇಲ್ಪಟ್ಟ ಹುದ್ದೆಯಲ್ಲಿ ಕನಿಷ್ಠ 5 ವರ್ಷ ಅನುಭವ ಹೊಂದಿರುವ ನೌಕರರಿಗೆ ಶೇ.10% ರಷ್ಟು ಹೆಚ್ಚಿನ ಅಂಕಗಳಿಗೆ ಅವಕಾಶ ನಿಗದಿಪಡಿಸಿದೆ.

4) ಸಹಕಾರಿಯಲ್ಲಿ ಹಾಲಿ ತಾತ್ಕಾಲಿಕ/ಗುತ್ತಿಗೆ/ದಿನಗೂಲಿ ಸಿಬ್ಬಂದಿಯಾಗಿ ಕಾರ್ಯನಿರ್ವಹಿಸುತ್ತಿರುವ ಎಲ್ಲ ನೌಕರರಿಗೆ ಈ ನೇಮಕಾತಿ ಪ್ರಕ್ರಿಯೆಯಡಿಯಲ್ಲಿ ಅರ್ಜಿ ಸಲ್ಲಿಸಲು ಅವಕಾಶವಿದ್ದು, ಅವರಿಗೆ ಆದ್ಯತೆ ನೀಡಲಾಗುವುದು

## ನೇಮಕಾತಿ ಪ್ರಕ್ರಿಯೆಯ ವಿವರಗಳು

**1. ಅರ್ಜಿಸಲ್ಲಿಸುವ ವಿಧಾನ :**

1) ಅರ್ಹ ಅಭ್ಯರ್ಥಿಗಳು ನಿಗದಿತ ಅರ್ಜಿ ನಮೂನೆಗಳನ್ನು ಸಹಕಾರಿಯ ವೆಬ್‌ಸೈಟ್ (www.swabhimanisouharda.com) ನಿಂದ ಡೌನ್‌ಲೋಡ್ ಮಾಡಿಕೊಂಡು, ಭರ್ತಿ ಮಾಡಿ, ಅಗತ್ಯ ದಾಖಲಾತಿಗಳೊಂದಿಗೆ ನಿಯಮಿತ ಅವಧಿಯಲ್ಲಿ ಸಹಕಾರಿಯ ಮೇಲ್ಕಂಡ ವಿಳಾಸದಲ್ಲಿರುವ ಸಹಕಾರಿಯ ಕೇಂದ್ರ ಕಛೇರಿಗೆ ತಲುಪುವಂತೆ ಕಳುಹಿಸತಕ್ಕದ್ದು.

2) ಅರ್ಜಿಯಲ್ಲಿ ನಮೂದಿಸುವ ಇ–ಮೇಲ್ ವಿಳಾಸ ಹಾಗೂ ಮೊಬೈಲ್ ಸಂಖ್ಯೆಯನ್ನು, ನೇಮಕಾತಿ ಪ್ರಕ್ರಿಯೆಯ ಸಂವಹನಕ್ಕೆ ಪರಿಗಣಿಸಲಾಗುವುದು.

3) ಅಧಿಸೂಚನೆಯಲ್ಲಿ ನೀಡಿರುವ ಸೂಚನೆಗಳನ್ವಯವೇ ಅರ್ಜಿಯನ್ನು ಭರ್ತಿ ಮಾಡಿ ಸಲ್ಲಿಸತಕ್ಕದ್ದು. ಅಪೂರ್ಣ ಹಾಗೂ ತಪ್ಪು ಮಾಹಿತಿಗಳನ್ನೊಳಗೊಂಡ, ನಿಗದಿತ ಸಮಯದ ನಂತರ ತಲುಪಿದ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

**2. ಅರ್ಜಿ ಸಲ್ಲಿಸುವ ಅವಧಿ**

ಅರ್ಜಿ ಸಲ್ಲಿಕೆ ಪ್ರಾರಂಭ ದಿನಾಂಕ : 18.10.2021 – ಬೆಳಿಗ್ಗೆ 10:30 ರಿಂದ

ಅರ್ಜಿ ಸಲ್ಲಿಕೆ ಕೊನೆಯ ದಿನಾಂಕ : 30.10.2021 – ಸಂಜೆ 5:30 ಗಂಟೆಯೊಳಗೆ

**3. ಅರ್ಜಿಯ ಜೊತೆ ಸಲ್ಲಿಸಬೇಕಾದ ದಾಖಲಾತಿಗಳು :**

1) ಹುದ್ದೆಗೆ ನಿಗದಿಪಡಿಸಿದ ಅರ್ಜಿ

2) ಹುದ್ದೆಗಳಿಗೆ ನಿಗದಿಪಡಿಸಲಾದ ವಿದ್ಯಾರ್ಹತೆಯನ್ನು ರುಜುವಾತುಪಡಿಸುವ ದಾಖಲಾತಿಗಳು. (ಎಲ್ಲಾ ವರ್ಷಗಳ/ಸೆಮಿಸ್ಟರ್‌ಗಳ ಅಂಕಪಟ್ಟಿಗಳು ಹಾಗೂ ಘಟಿಕೋತ್ಸವದ ಪ್ರಮಾಣ ಪತ್ರಗಳ ಸ್ವಯಂ ದೃಢೀಕರಿಸಿದ ಪ್ರತಿಗಳನ್ನು ಲಗತ್ತಿಸಬೇಕು.)

3) ಹುದ್ದೆಗಳಿಗೆ ನಿಗದಿಪಡಿಸಲಾದ ಅನುಭವವನ್ನು ಹೊಂದಿರುವ ಕುರಿತ ದಾಖಲಾತಿಗಳು.

4) ಕಂಪ್ಯೂಟರ್ ಜ್ಞಾನವನ್ನು ಹೊಂದಿರುವ ಕುರಿತು ಸ್ವಯಂ ದೃಢೀಕರಿಸಿದ ದಾಖಲಾತಿ.

5) ಭಾವ ಚಿತ್ರ

**4. ವಯೋಮಿತಿ :**

1) ಅಧಿಕಾರಿ ಮತ್ತು ಲೆಕ್ಕ ಸಹಾಯಕ ಹುದ್ದೆಗೆ : ಕನಿಷ್ಠ 18 ಗರಿಷ್ಠ 36.

2) ಹಿರಿಯ ಸಹಾಯಕರು/ಕಿರಿಯ ಸಹಾಯಕರು ಹುದ್ದೆಗೆ : ಕನಿಷ್ಠ 18 ಗರಿಷ್ಠ 32.

5. **ಆಯ್ಕೆ ವಿಧಾನ :**

1) ಎಲ್ಲಾ ಹುದ್ದೆಗಳಿಗೆ ಆಯ್ಕೆಯನ್ನು ಲಿಖಿತ ಪರೀಕ್ಷೆ ಮತ್ತು ಸಂದರ್ಶನದ ಮೂಲಕ ಮಾಡಲಾಗುತ್ತದೆ. ಲಿಖಿತ ಪರೀಕ್ಷೆಯು, ಹಣಕಾಸು ವಿಷಯ, ಸಹಕಾರ ವಿಷಯ, ವಿದ್ಯಾರ್ಹತಾ ವಿಷಯ ಜ್ಞಾನ, ಭಾಷಾ ಜ್ಞಾನ, ಸಾಮಾನ್ಯ ಜ್ಞಾನಕ್ಕೆ ಸಂಬಂಧಿಸಿದ ಬಹು ಆಯ್ಕೆಯ 100 ಅಂಕಗಳ ಪ್ರಶ್ನೆ ಪತ್ರಿಕೆಯನ್ನು ಒಳಗೊಂಡಿರುತ್ತದೆ.
2) ಲಿಖಿತ ಪರೀಕ್ಷೆ/ಸಂದರ್ಶನ/ಕೌಶಲ್ಯ ಪರೀಕ್ಷೆಗೆ ಕರೆಯಲ್ಪಟ್ಟ ಅಭ್ಯರ್ಥಿಗಳು ತಮ್ಮ ಸ್ವಂತ ವೆಚ್ಚದಲ್ಲಿ ಹಾಜರಾಗಬೇಕು. ಯಾವುದೇ ಪ್ರಯಾಣ ಭತ್ಯೆ/ದಿನ ಭತ್ಯೆಗಳನ್ನು ನೀಡಲಾಗುವುದಿಲ್ಲ.
3) ಲಿಖಿತ ಪರೀಕ್ಷೆ ಹಾಗೂ ಸಂದರ್ಶನದ ದಿನಾಂಕ ಮತ್ತು ಸ್ಥಳದ ವಿವರಗಳನ್ನು ಅರ್ಜಿಯಲ್ಲಿ ನಮೂದಿಸಿದ ಇ ಮೇಲ್ ಐಡಿಗೆ ಕಳುಹಿಸುವ ಮೂಲಕ ಅರ್ಜಿ ಸಲ್ಲಿಸಿದ ಅಭ್ಯರ್ಥಿಗಳಿಗೆ ತಿಳಿಸಲಾಗುವುದು.

7. **ಸಾಮಾನ್ಯ ಸೇವಾ ಷರತ್ತುಗಳು:**

1) ಸಹಕಾರಿಯ ಸೇವೆಗೆ ಆಯ್ಕೆಯಾದ ಅಭ್ಯರ್ಥಿಯು ಎರಡು ವರ್ಷಗಳ ಕಾಲ ಪರೀಕ್ಷಾರ್ಥ ಸೇವಾ ಅವಧಿಯನ್ನು ಹೊಂದಿರುತ್ತಾರೆ.
2) ತೃಪ್ತಿದಾಯಕ ಪರಿಕ್ಷಾರ್ಥ ಸೇವಾ ಅವಧಿಯನ್ನು ಪೂರ್ಣಗೊಳಿಸಿದ ಅಭ್ಯರ್ಥಿಯ ಸೇವೆಯನ್ನು ಸಹಕಾರಿಯ ಆಡಳಿತ ಮಂಡಳಿಯ ನಿರ್ಣಯಕ್ಕೆ ಒಳಪಟ್ಟು ಖಾಯಮಾತಿ ಗೊಳಿಸಲಾಗುತ್ತದೆ.
3) ಸಹಕಾರಿಯ ಸೇವೆಗೆ ಆಯ್ಕೆಯಾದ ಅಭ್ಯರ್ಥಿಗೆ ಆಯಾ ಹುದ್ದೆಗಳಿಗನುಗುಣವಾಗಿ ಆರಂಭದಲ್ಲಿ ಆಡಳಿತ ಮಂಡಳಿ ನಿರ್ಣಯಿದಂತೆ ಕ್ರೋಢೀಕೃತ ವೇತನ ಹಾಗೂ ಆಡಳಿತ ಮಂಡಳಿ ಅನುಮೋದನೆಯ ನಂತರದಲ್ಲಿ ಈ ಕೆಳಗಿನಂತೆ ವೇತನ ಶ್ರೇಣಿಯನ್ನು ನೀಡಲಾಗುತ್ತದೆ.

| **ಕ್ರ.ಸಂ** | **ಹುದ್ದೆ** | | **ವೇತನ ಶ್ರೇಣಿ** |
|---|---|---|---|
| 1 | ಅಧಿಕಾರಿ | | 20900-650-22200-700-23600-750-25100-800-26700-850-28400-900-30200-950-32100 |
| 2 | ಲೆಕ್ಕ ಸಹಾಯಕರು | | 19700-600-20900-650-22200-700-23600-750-25100-800-26700-850-28400-900-30200 |
| 3 | ಹಿರಿಯ ಸಹಾಯಕರು | | 18600-550-19700-600-20900-650-22200-700-23600-750-25100-800-26700-850-28400 |
| 4 | ಕಿರಿಯ ಸಹಾಯಕರು | | 17700-550-18800-600-20000-650-21300-700-22700-750-24200-800-25800-850-27500 |

4) ಅನ್ವಯವಾಗುವ ಹೆಚ್ಚಳ, ತುಟ್ಟಿ ಭತ್ಯೆ, ಮನೆ ಬಾಡಿಗೆ ಭತ್ಯೆ, ಮತ್ತು ನಗರ ಪರಿಹಾರ ಭತ್ಯೆಗಳು ಆಡಳಿತ ಮಂಡಳಿಯು ಕಾಲ ಕಾಲಕ್ಕೆ ನಿಗದಿಪಡಿಸಿದ ದರದಲ್ಲಿ ಇರುತ್ತವೆ.

5) ವಿದ್ಯಾರ್ಹತೆ ಹಾಗೂ ಅನುಭವಕ್ಕೆ ಸಂಬಂಧಪಟ್ಟ ದಾಖಲಾತಿಗಳನ್ನು ಸಂದರ್ಶನದ ಸಮಯದಲ್ಲಿ ಹಾಜರುಪಡಿಸತಕ್ಕದ್ದು.

6) ಆಯ್ಕೆಯಾದ ಅಭ್ಯರ್ಥಿಗಳು ರೂ.5000/–ಗಳ ಭದ್ರತಾ ಠೇವಣಿಯನ್ನು ಸಹಕಾರಿಗೆ ನೀಡಬೇಕು ಹಾಗೂ ಇಂಡೆಮ್ನಿಟಿ ಬಾಂಡ್ ನೀಡಬೇಕು.

7) ಸಹಕಾರಿಯು ಯಾವುದೇ ಹುದ್ದೆಗೆ ಸಂಬಂಧಿಸಿದಂತೆ ಪ್ರತ್ಯೇಕ ಸೇವಾ ಷರತ್ತುಗಳನ್ನು ವಿಧಿಸಬಹುದಾಗಿದೆ.

8) ಆಯ್ಕೆಯಾದ ಅಭ್ಯರ್ಥಿಗಳು ಸಹಕಾರಿಯ ಸೇವಾ ನಿಯಮಗಳಿಗೆ ಒಳಪಟ್ಟಿರುತ್ತಾರೆ.

9) ನೇಮಕಾತಿ ಪ್ರಕ್ರಿಯೆಯನ್ನು ಯಾವುದೇ ಸಂದರ್ಭದಲ್ಲಿಯೂ ಯಾವುದೇ ಕಾರಣವನ್ನು ನೀಡದೆ ರದ್ದುಗೊಳಿಸುವ ಅಧಿಕಾರವನ್ನು ಸಂಯುಕ್ತ ಸಹಕಾರಿಯು ಹೊಂದಿರುತ್ತದೆ.

**8. ಸಾಮಾನ್ಯ ಅರ್ಹತಾ ಷರತ್ತುಗಳು:**

1) ಭಾರತೀಯ ನಾಗರೀಕನಾಗಿರತಕ್ಕದ್ದು.

2) ಅಭ್ಯರ್ಥಿಯು ಮಾನಸಿಕವಾಗಿ ಮತ್ತು ದೈಹಿಕವಾಗಿ ಆರೋಗ್ಯವಂತನಾಗಿರತಕ್ಕದ್ದು ಮತ್ತು ಅವರ ನೇಮಕಾತಿಯ ಕರ್ತವ್ಯಗಳ ದಕ್ಷ ನಿರ್ವಹಣೆಗೆ ಆತಂಕವನ್ನುಂಟು ಮಾಡುವ ಸಂಭವವಿರುವ ಯಾವುದೇ ದೈಹಿಕ ನ್ಯೂನತೆಯಿಂದ ಮುಕ್ತನಾಗಿರತಕ್ಕದ್ದು.

3) ದೈಹಿಕವಾಗಿ ಅನರ್ಹರಾಗಿದ್ದಾನೆಂಬುದಾಗಿ ವೈದ್ಯಕೀಯ ಪರೀಕ್ಷೆಯಲ್ಲಿ ಕಂಡುಬಂದಲ್ಲಿ ನೇಮಕಾತಿಯನ್ನು ತಿರಸ್ಕರಿಸುವ ಪೂರ್ಣ ವಿವೇಚನಾಧಿಕಾರವನ್ನು ಸಹಕಾರಿಯು ಕಾದಿರಿಸಿಕೊಂಡಿದೆ.

4) ಒಬ್ಬ ಅಭ್ಯರ್ಥಿಯು ನಕಲಿ ವ್ಯಕ್ತಿಯಾಗಿರುವನೆಂದು ಅಥವಾ ಖೋಟಾ ದಸ್ತಾವೇಜು ಅಥವಾ ತಿದ್ದಲಾದ ದಸ್ತಾವೇಜುಗಳನ್ನು ಸಲ್ಲಿಸಿರುವನೆಂದು ಅಥವಾ ತಪ್ಪು ಅಥವಾ ಸುಳ್ಳು ಹೇಳಿಕೆ ನೀಡಿರುವನೆಂದು ಅಥವಾ ವಾಸ್ತವಿಕ ಮಾಹಿತಿಯನ್ನು ಮರೆಮಾಚಿರುವನೆಂದು ಅಥವಾ ನೇಮಕಾತಿ ಉದ್ದೇಶಗಳಿಗಾಗಿ ನಡೆಸಲಾದ ಪರೀಕ್ಷೆಯಲ್ಲಿ/ ಸಂದರ್ಶನದಲ್ಲಿ ಅನುಚಿತ ಮಾರ್ಗವನ್ನು ಅನುಸರಿಸುತ್ತಿರುವನೆಂದು ಅಥವಾ ಅನುಸರಿಸಲು ಪ್ರಯತ್ನಿಸಿರುವನೆಂದು ಅಥವಾ ಅವರ ನೇಮಕಾತಿಯ ಸಂಬಂಧದಲ್ಲಿ ಯಾವುದೇ ಇತರೆ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅವಲಂಬಿಸಿರುವನೆಂದು, ಕಂಡುಬಂದಲ್ಲಿ ಅವನು/ಅವಳು ಸ್ವತ: ಕ್ರಿಮಿನಲ್ ವ್ಯವಹರಣೆಗಳಿಗೆ ಮತ್ತು ಶಿಸ್ತು ಕ್ರಮಕ್ಕೆ ಒಳಪಡುವುದಲ್ಲದೆ, ಹುದ್ದೆಯ ಸಂದರ್ಶನದಿಂದ/ಆಯ್ಕೆಯಿಂದ ಅಭ್ಯರ್ಥಿತ್ವವನ್ನು ರದ್ದುಪಡಿಸಲಾಗುವುದು.

ಸಹಿ/–

ಮುಖ್ಯಕಾರ್ಯನಿರ್ವಹಣಾಧಿಕಾರಿ (ಪ್ರಭಾರ) ಮತ್ತು
ಸದಸ್ಯ ಕಾರ್ಯದರ್ಶಿ, ಸಿಬ್ಬಂದಿ ನೇಮಕಾತಿ ಸಮಿತಿ

ದಿನಾಂಕ: 16.10.2021

ಸ್ಥಳ: ಬೆಂಗಳೂರು